# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 111 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಪ್ರತಾಪ್‌ಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 10.12.2018 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ | ಉಡುಪಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ನಿಲಯಗಳು ಯಾವುವು; ಅವುಗಳಲ್ಲಿ ಸ್ವಂತ ನಿವೇಶನ ಮತ್ತು ಕಟ್ಟಡವನ್ನು ಹೊಂದಿದ ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರ ನಿಲಯಗಳು ಯಾವುವು; ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿ ನಿಲಯಗಳ ವಾರ್ಷಿಕ ಬಾಡಿಗೆ ಮೊತ್ತವೆಷ್ಟು; (ವಿದ್ಯಾರ್ಥಿ/ ವಿದ್ಯಾರ್ಥಿನಿಲಯವಾರು ಮಾಹಿತಿಯನ್ನು ನೀಡುವುದು) | ಉಡುಪಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳು, ಸ್ವಂತ, ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳು ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಪಾವತಿಸುತ್ತಿರುವ ಬಾಡಿಗೆ ಮೊತ್ತದ ವಿದ್ಯಾರ್ಥಿನಿಲಯವಾರು ವಿವರಗಳು www.backwardclasses.kar.nic.in ರಲ್ಲಿ ಲಭ್ಯವಿರುತ್ತದೆ. |
| ಆ | ಈ ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯಗಳಲ್ಲಿ ವಿದ್ಯಾರ್ಥಿ/ವಿದ್ಯಾರ್ಥಿನಿಯರ ವಾಸ್ತವ್ಯದ ಗರಿಷ್ಠ ಸಾಮರ್ಥ್ಯವೆಷ್ಟು ಮತ್ತು ಪ್ರಸ್ತುತ ವಾಸ್ತವ್ಯವಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; (ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯವಾರು ಮಾಹಿತಿಯನ್ನು ನೀಡುವುದು) | ಉಡುಪಿ ಜಿಲ್ಲೆಯಲ್ಲಿರುವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿ/ವಿದ್ಯಾರ್ಥಿನಿಯರ ವಾಸ್ತವ್ಯದ ಗರಿಷ್ಠ ಸಾಮರ್ಥ್ಯ ಮತ್ತು ಪ್ರಸ್ತುತ ವಾಸ್ತವ್ಯವಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ವಿವರಗಳು ಕೆಳಕಂಡಂತಿವೆ. (ಕೆಳಗಿನ ಕೋಷ್ಟಕ ನೋಡಿ) ವಿದ್ಯಾರ್ಥಿನಿಲಯವಾರು ವಿವರಗಳು www.backwardclasses.kar.nic.in ರಲ್ಲಿ ಲಭ್ಯವಿರುತ್ತದೆ. |

| ವಿವರ | ಬಾಲಕರ ವಿದ್ಯಾರ್ಥಿನಿಲಯಗಳು | | | ಬಾಲಕಿಯರ ವಿದ್ಯಾರ್ಥಿನಿಲಯಗಳು | | |
|---|---|---|---|---|---|---|
| | ನಿಲಯಗಳ ಸಂಖ್ಯೆ | ಮಂಜೂರಾತಿ ಸಂಖ್ಯೆ | ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ | ನಿಲಯಗಳ ಸಂಖ್ಯೆ | ಮಂಜೂರಾತಿ ಸಂಖ್ಯೆ | ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ |
| ಮೆಟ್ರಿಕ್-ಪೂರ್ವ | 12 | 570 | 566 | 6 | 280 | 263 |
| ಮೆಟ್ರಿಕ್-ನಂತರ | 9 | 900 | 761 | 14 | 1515 | 1283 |

LC QUESTION NO.111.jpg



**ಇ** ಕಳೆದ 3 ವರ್ಷಗಳಲ್ಲಿ ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯದ ಪ್ರವೇಶಾತಿಯನ್ನು ಕೋರಿ ಅರ್ಜಿಯನ್ನು ಸಲ್ಲಿಸಿದ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ಮತ್ತು ಪ್ರವೇಶಾತಿಯನ್ನು ಪಡೆದ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; ಬಾಕಿಯುಳಿದ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಶಿಕ್ಷಣ ಹಕ್ಕನ್ನು ಕಾಪಾಡುವ ನಿಟ್ಟಿನಲ್ಲಿ ಇಲಾಖೆಯ ಕಾರ್ಯಕ್ರಮಗಳು ಯಾವುವು; (ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯವಾರು ಮಾಹಿತಿಯನ್ನು ನೀಡುವುದು)

ಕಳೆದ 3 ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿನ ವಿದ್ಯಾರ್ಥಿನಿಲಯಗಳಿಗೆ ಪ್ರವೇಶಾತಿ ಕೋರಿ ಬಂದ ಅರ್ಜಿಗಳು ಹಾಗೂ ಪ್ರವೇಶಾತಿಯನ್ನು ಪಡೆದ ವಿದ್ಯಾರ್ಥಿ/ವಿದ್ಯಾರ್ಥಿನಿಯರ ವಿವರ ಕೆಳಕಂಡಂತಿದೆ.

| ವಿವರ | | ಮಂಜೂರಾತಿ ಸಂಖ್ಯೆ | 2016-17 | | 2017-18 | | 2018-19 | |
|---|---|---|---|---|---|---|---|---|
| | | | ಬಂದ ಅರ್ಜಿಗಳ ಸಂಖ್ಯೆ | ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ | ಬಂದ ಅರ್ಜಿಗಳ ಸಂಖ್ಯೆ | ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ | ಬಂದ ಅರ್ಜಿಗಳ ಸಂಖ್ಯೆ | ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ |
| ಮೆಟ್ರಿಕ್-ಪೂರ್ವ | ಬಾಲಕ | 570 | 582 | 580 | 601 | 601 | 579 | 566 |
| | ಬಾಲಕಿ | 280 | 224 | 224 | 265 | 265 | 288 | 263 |
| ಮೆಟ್ರಿಕ್-ನಂತರ | ಬಾಲಕ | 900 | 680 | 638 | 831 | 733 | 853 | 761 |
| | ಬಾಲಕಿ | 1515 | 1185 | 1095 | 1512 | 1253 | 1665 | 1283 |

ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯವಾರು ವಿವರಗಳು www.backwardclasses.kar.nic.in ರಲ್ಲಿ ಲಭ್ಯವಿರುತ್ತವೆ.

ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಅವರ ಶೈಕ್ಷಣಿಕ ವಿದ್ಯಾಭ್ಯಾಸವನ್ನು ಮುಂದುವರೆಸುವ ನಿಟ್ಟಿನಲ್ಲಿ ವಿದ್ಯಾಸಿರಿ ಯೋಜನೆಯಡಿ ಮಾಸಿಕ ರೂ.1500/- ರಂತೆ 10 ತಿಂಗಳಿಗೆ ರೂ.15,000/-ಗಳಂತೆ 2017-18ನೇ ಸಾಲಿನಲ್ಲಿ 1479 ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಒಟ್ಟು ರೂ.201.18 ಲಕ್ಷಗಳನ್ನು ಜಮಾ ಮಾಡಲಾಗಿರುತ್ತದೆ.

**ಈ** ಉಡುಪಿ ಜಿಲ್ಲೆಯಲ್ಲಿ ಸ್ವಂತ ಕಟ್ಟಡ ಮತ್ತು ನಿವೇಶನ ಹೊಂದಿ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಕೊರತೆಯಿಂದ ಮುಚ್ಚಳ ಪಟ್ಟ ಗ್ರಾಮಾಂತರ ಪ್ರದೇಶದಲ್ಲಿ ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯಗಳನ್ನು ಯಾವುವು; ಗ್ರಾಮಾಂತರ ಪ್ರದೇಶದಲ್ಲಿ ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯಗಳನ್ನು ಮುಚ್ಚಿ ನಗರ ಪ್ರದೇಶದಲ್ಲಿ ಹೊಸದಾಗಿ ಬಾಡಿಗೆ ಕಟ್ಟಡದಲ್ಲಿ ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯವನ್ನು ಪ್ರಾರಂಭಿಸುವ ಔಚಿತ್ಯವೇನು; ಅಧಿಕಾರಿಗಳ ಮತ್ತು ಸಿಬ್ಬಂದಿಗಳ ಅನುಕೂಲಕ್ಕಾಗಿ ಪಟ್ಟಣದತ್ತ ವಲಸೆಯಾಗುತ್ತಿರುವುದು ನಿಜವೇ?

ಉಡುಪಿ ಜಿಲ್ಲೆಯಲ್ಲಿ ಸ್ವಂತ ಕಟ್ಟಡ ಹೊಂದಿದ್ದ ಈ ಕೆಳಕಂಡ 2 ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳನ್ನು ವಿದ್ಯಾರ್ಥಿ/ವಿದ್ಯಾರ್ಥಿನಿಯರ ಕೊರತೆಯಿಂದ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳನ್ನಾಗಿ ಪರಿವರ್ತಿಸಿ, ಸ್ಥಳಾಂತರಿಸಲಾಗಿರುತ್ತದೆ.

1) 50 ಸಂಖ್ಯಾಬಲದ ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕಿದೂರು ಈ ನಿಲಯವು ಸ್ವಂತ ಕಟ್ಟಡ ಹೊಂದಿದ್ದು, ವಿದ್ಯಾರ್ಥಿಗಳ ಕೊರತೆಯಿಂದ ಸದರಿ ನಿಲಯವನ್ನು 100 ಸಂಖ್ಯಾಬಲದ ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನಾಗಿ ಪರಿವರ್ತಿಸಿ, ಕೋಟೇಶ್ವರದಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುತ್ತದೆ.

2) 50 ಸಂಖ್ಯಾಬಲದ ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಶಿರ್ವ ಈ ನಿಲಯವು ಸ್ವಂತ ಕಟ್ಟಡ ಹೊಂದಿದ್ದು, ವಿದ್ಯಾರ್ಥಿಗಳ ಕೊರತೆಯಿಂದ ಸದರಿ ನಿಲಯವನ್ನು 100 ಸಂಖ್ಯಾಬಲದ ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನಾಗಿ ಪರಿವರ್ತಿಸಿ, ಬಾರ್ಕೂರಿನಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುತ್ತದೆ.

ಗ್ರಾಮೀಣ ಭಾಗದಲ್ಲಿನ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅಗತ್ಯ ವಿದ್ಯಾರ್ಥಿಗಳ ಸಂಖ್ಯೆಯು ಕೊರತೆಯಾದಲ್ಲಿ ಮಾತ್ರ ಅಂತಹ ವಿದ್ಯಾರ್ಥಿನಿಲಯಗಳನ್ನು, ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ಹೆಚ್ಚಿನ ಬೇಡಿಕೆ ಇರುವ ನಗರ/ ಪಟ್ಟಣಗಳಿಗೆ ಸ್ಥಳೀಯ ಬೇಡಿಕೆಯನ್ನಾಧರಿಸಿ, ಸ್ಥಳಾಂತರಿಸಲಾಗುತ್ತದೆ.

ಹಿಂವಕ 1199 ಪಿಎಂಎಸ್ 2018

(ಸಿ.ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

12/7/2018
https://mail.google.com/mail/u/0/#inbox/QgrcJHsNjBzXGhwdxBgTcwbQRQCxStVLcNb?projector=1&messagePartId=0.1
1/1